MAY 22,2025

ALL INDIA RADIO- DHARWAD

PRADESH SAMACHARA (KANNADA) 07.05AM

ಮುಖ್ಯಾಂಶಗಳು:

- ಅಮೃತ ಭಾರತ್ ರೈಲ್ವೆ ನಿಲ್ದಾಣ ಯೋಜನೆ; ರಾಜ್ಯದ ಐದು ನವೀಕೃತ ನಿಲ್ದಾಣಗಳು ಇಂದು ಪ್ರಧಾನಿ ಅವರಿಂದ ಲೋಕಾರ್ಪಣೆ.
- ಮಾನವ ಆನೆ ಸಂಘರ್ಷ ತಡೆಗಟ್ಟಲು ಅಕ್ಕ ಪಕ್ಕದ ರಾಜ್ಯಗಳ ಸಹಕಾರ ಅಗತ್ಯ– ಮುಖ್ಯಮಂತ್ರಿ ಸಿದ್ದರಾಮಯ್ಯ.
- ಬೆಂಗಳೂರಿನಲ್ಲಿ ಮಳೆ ಹಾನಿ ಪರಿಶೀಲನೆ; ರಾಜಕಾಲುವೆ ಒತ್ತುವರಿ ಕೂಡಲೇ ತೆರವುಗೊಳಿಸುವಂತೆ ಮುಖ್ಯಮಂತ್ರಿಯವರಿಂದ ಸೂಚನೆ.
- ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ –ವಿಪಕ್ಷ ನಾಯಕ ಆರ್. ಅಶೋಕ ಟೀಕೆ.

<><><>

ವಾರ್ತೆಗಳ ವಿವರ...

<><><>

ಕೇಂದ್ರ ಪುರಸ್ಕೃತ, 'ಅಮೃತ ಭಾರತ ರೈಲು ನಿಲ್ದಾಣ ಯೋಜನೆ' ಅಡಿ, ರಾಜ್ಯದ ಧಾರವಾಡ, ಗದಗ, ಗೋಕಾಕ, ಬಾಗಲಕೋಟ ಹಾಗೂ ಮುನಿರಾಬಾದ್‌ರೈಲು ನಿಲ್ದಾಣಗಳನ್ನು, ಪ್ರಥಮ ಹಂತದಲ್ಲಿ ಸುಸಜ್ಜಿತವಾಗಿ ಪುನರ್ ಅಭಿವೃದ್ಧಿ ಪಡಿಸಲಾಗಿದ್ದು, ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ರಾಜಸ್ಥಾನದ ಬಿಕಾನೇರ್‌ನಿಂದ, ವರ್ಚುವಲ್ ವೇದಿಕೆ ಮೂಲಕ, ಲೋಕಾರ್ಪಣೆ ಗೊಳಿಸಲಿದ್ದಾರೆ. ಪ್ರಯಾಣಿಕರ ಸುಗಮ ಸಂಚಾರಕ್ಕೆ ಕೇಂದ್ರ ಸರ್ಕಾರ ಅಮೃತ ಭಾರತ ರೈಲು ಯೋಜನೆಯಡಿ ನಿಲ್ದಾಣಗಳನ್ನು ಅಭಿವೃದ್ಧಿಪಡಿಸುತ್ತಿದೆ. ಈ ಮೂಲಕ ಸಮಯದ ಉಳಿತಾಯದ ಜೊತೆಗೆ ಪರಿಸರ ಸ್ನೇಹಿ ವಾತಾವರಣವು ಪ್ರಯಾಣಿಕರಿಗೆ ರೈಲು ನಿಲ್ದಾಣಗಳಲ್ಲಿ ಲಭ್ಯವಾಗಲಿದೆ.

<><><>

'ಅಮೃತ ಭಾರತ ರೈಲ್ವೆ ಸ್ಟೇಶನ್ ಯೋಜನೆಯಡಿ' 17.1 ಕೋಟಿ ರೂಪಾಯಿ ಅನುದಾನದಲ್ಲಿ ಧಾರವಾಡದ ರೈಲ್ವೆ ನಿಲ್ದಾಣ ಪುನರಭಿವೃದ್ಧಿಗೊಂಡಿದ್ದು, ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ಉದ್ಘಾಟನೆಗೊಳ್ಳಲಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಧಾರವಾಡ ರೈಲ್ವೆ ನಿಲ್ದಾಣದ ಎಲ್ಲಾ ಪ್ಲಾಟಫಾರ್ಮ್‌ಗಳನ್ನು ಸಂಪರ್ಕಿಸುವ 12 ಮೀಟರ್ ಅಗಲದ ಪಾದಚಾರಿ ಸೇತುವೆ; ಸುಲಭ ಪ್ರವೇಶಕ್ಕಾಗಿ ಮೂರು ಲಿಫ್ಟ್‌ಗಳು; ಪ್ಲಾಟ್ಫಾರ್ಮ್ 1 ರಲ್ಲಿ ಎರಡು ಎಸ್ಕಲೇಟರ್‌ಗಳನ್ನು ಅಳವಡಿಸಲಾಗಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಹೇಳಿದ್ದಾರೆ.

ಧಾರವಾಡ ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೇರಿಸಿದ ಪ್ರಧಾನಿ ನರೇಂದ್ರ ಮೋದಿ ಕೇಂದ್ರ ರೇಲ್ವೆ ಖಾತೆ ಸಚಿವ ಅಶ್ವಿನಿ ವೈ ್ಣವ ಹಾಗೂ ಕೇಂದ್ರ ರೇಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅನಂತ ಧನ್ಯವಾದಗಳು ಎಂದು ಹೇಳಿದ್ದಾರೆ.

<><><>

ದಕ್ಷಿಣ ಭಾರತದ ಶಕ್ತಿ ಕೇಂದ್ರದಲ್ಲಿ ಒಂದಾದ ಕೊಪ್ಪಳ ಜಿಲ್ಲೆಯ ಪ್ರಸಿದ್ಧ ಹುಲಿಗೆಮ್ಮ ದೇವಿಯ ದೇವಾಲಯಕ್ಕೆ ಹೊಂದಿಕೊಂಡಿರುವ ಮುನಿರಾಬಾದ್ ರೈಲು ನಿಲ್ದಾಣ ಅಮೃತ ಭಾರತ ಯೋಜನೆಯಡಿ ಆಧುನೀಕರಣಗೊಂಡಿದೆ. ಇಲ್ಲಿಗೆ ಭೇಟಿ ನೀಡುವ ಹೆಚ್ಚಿನ ಭಕ್ತರು ಹಾಗೂ ಪ್ರಯಾಣಿಕರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಿರುವುದರಿಂದ ಸಾಕ ್ಟ ಅನುಕೂಲವಾಗಿದೆ.

<><><>

ಬೆಳಗಾವಿ ಜಿಲ್ಲೆಯ ಗೋಕಾಕ ರೈಲ್ವೆ ನಿಲ್ದಾಣವನ್ನು ಸಹ 16 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಮೇಲ್ದರ್ಜೆರಿಸಲಾಗಿದ್ದು, ಇಂದು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಎರಡು ಅಂತಸ್ತಿನ ಕಟ್ಟಡದ ನಿಲ್ದಾಣ, ಆಧುನಿಕ ಮಾದರಿಯ ಟಿಕೆಟ್ ಕೌಂಟರ್, ಪ್ಲಾಟ್ ಫಾರ್ಮ್, ಸುಸಜ್ಜಿತ ಶೌಚಾಲಯ, ವಿಶ್ರಾಂತಿ ಗೃಹ ಸೇರಿದಂತೆ ವಿವಿಧ ಸೌಲಭ್ಯಗಳಿಂದ ಕೂಡಿದ್ದು, ರೈಲು ನಿಲ್ದಾಣವನ್ನು ಪ್ರಯಾಣಿಕರ ಸ್ನೇಹಿಯಾಗಿ ಅಭಿವೃದ್ಧಿಪಡಿಸಲಾಗಿದೆ.

<><><>

ಅಮೃತ ಭಾರತ್ ರೈಲ್ವೆ ಸ್ಟೇ ನ್ ಯೋಜನೆ: ಐದು ನವೀಕೃತ ನಿಲ್ದಾಣಗಳಲ್ಲಿ ಬಾಗಲಕೋಟೆಯ ನಿಲ್ದಾಣವೂ ಲೋಕಾರ್ಪಣೆಗೆ ಸಜ್ಜಾಗಿದೆ. ನವೀಕರಣಗೊಂಡ ಬಾಗಲಕೋಟೆ ರೈಲ್ವೆ ನಿಲ್ದಾಣದ ಅಭಿವೃದ್ಧಿಗೆ 16.06 ಕೋಟಿ ರೂಪಾಯಿ ವಿನಿಯೋಗಿಸಲಾಗಿದೆ. ಇಂದು ಕೇಂದ್ರ ಸಚಿವ ವಿ.ಸೋಮಣ್ಣ ಬಾಗಲಕೋಟೆಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

'ಐ.ಎನ್.ಎಸ್.ವಿ...ಕೌಂಡಿನ್ಯ' ದೇಶದ ಅಭಿವೃದ್ಧಿ ಮತ್ತು ಸಂಸ್ಕೃತಿಯ ಪ್ರತಿರೂಪ ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರಸಿಂಗ್ ಶೇಖಾವತ್ ಹೇಳಿದ್ದಾರೆ. ಅವರು ಉತ್ತರಕನ್ನಡ ಜಿಲ್ಲೆಯ ಕಾರವಾರದ ಐ.ಎನ್.ಎಸ್. ಕದಂಬ ನೌಕಾನೆಲೆಯಲ್ಲಿ ಸಾಂಪ್ರದಾಯಿಕ ಶೈಲಿಯಲ್ಲಿ ನಿರ್ಮಿಸಿದ INSV ಕೌಂಡಿನ್ಯವನ್ನು ಭಾರತೀಯ ನೌಕಾಪಡೆಗೆ ಸೇರ್ಪಡೆಗೊಳಿಸಿ ಮಾತನಾಡಿದರು. ಈ ಕ್ಷಣ ಸಾಂಸ್ಕೃತಿಕ ಮತ್ತು ಕಡಲ ಪುನರುಜ್ಜೀವನದ ಒಂದು ಮಹತ್ವದ ಕ್ಷಣವಾಗಿದೆ ಎಂದರು.

<><><>

ಮಾನವ ಆನೆ ಸಂಘ ್ಷ ತಡೆಗಟ್ಟಲು ಅಕ್ಕ ಪಕ್ಕದ ರಾಜ್ಯಗಳ ಸಹಕಾರ ಅಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ರಾಜ್ಯದಿಂದ ಆಂಧ್ರಪ್ರದೇಶ ರಾಜ್ಯಕ್ಕೆ ಕುಮ್ಕಿ ಆನೆಗಳನ್ನು ಹಸ್ತಾಂತರಿಸುವ ಒಡಂಬಡಿಕೆಗೆ ಸಹಿ ಹಾಕಿ, ಆನೆಗಳನ್ನು ಹಸ್ತಾಂತರಿಸಿ ಮಾತನಾಡಿದ ಅವರು, ದೇಶದಲ್ಲೇ ಆನೆ ಸಂಪತ್ತು ಹೆಚ್ಚಾಗಿರುವ ರಾಜ್ಯ ನಮ್ಮದು. 3695 ಆನೆಗಳು ನಮ್ಮಲ್ಲಿವೆ ಎಂದರು. ಮಾನವ, ಆನೆ ಸಂಘ ್ಷ ತಡೆಯುವುದರಿಂದ ಜೀವ ಹಾನಿ, ಬೆಳೆ ಹಾನಿ ತಪ್ಪುತ್ತದೆ. ಈ ಮಹತ್ವದ ಉದ್ದೇಶದಿಂದಲೇ ರಾಜ್ಯದಿಂದ ಆರು ಕುಮ್ಕಿ ಆನೆಗಳನ್ನು ಆಂಧ್ರಪ್ರದೇಶಕ್ಕೆ ಹಸ್ತಾಂತರಿಸಲಾಗುತ್ತದೆ ಎಂದರು.

<><><>

ಬದಲಾವಣೆ ಪ್ರಕೃತಿಯ ನಿಯಮ. ಕೃಷಿ ಪದ್ಧತಿ ಎಂದರೆ ಕ ್ಟವಾದ ಕೆಲಸ, ಸಾಲ ಮಾಡಬೇಕು, ನಷ್ಟ ಅನುಭವಿಸಬೇಕು ಎಂಬ ಮನೋಭಾವವನ್ನು ತೊರೆಯಬೇಕು. ಕೃಷಿಯಲ್ಲಿ ತಾಂತ್ರಿಕತೆ ಹಾಗೂ ಕೃಷಿ ಯಂತ್ರೋಪಕರಣಗಳನ್ನು ಬಳಸಿಕೊಂಡು ರೈತರು ಆರ್ಥಿಕವಾಗಿ ಸದೃಢರಾಗಬಹುದು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯದ ಕೃಷಿ ಮಹಾವಿದ್ಯಾಲಯ, ವಿ.ಸಿ.ಫಾರಂನಲ್ಲಿ ಕಬ್ಬು, ಭತ್ತ, ರಾಗಿ ಬೆಳೆಗಳ ಬಗ್ಗೆ ವಿಶೇ ್ ತಾಂತ್ರಿಕ ಸಂವಾದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಂಡ್ಯ ಜಿಲ್ಲೆಯು ಕೃಷಿ ಪ್ರಧಾನ ಜಿಲ್ಲೆಯಾಗಿದ್ದು, ಕೃಷಿ ಪದ್ದತಿ ಯಲ್ಲಿ ಹೆಚ್ಚು ಇಳುವರಿ ಹಾಗೂ ಆರ್ಥಿಕವಾಗಿ ಸದೃಢರಾಗಲು ಅನೇಕ ಹೊಸ ಪದ್ಧತಿಗಳನ್ನು ಕೃಷಿ ವಿಜ್ಞಾನಿಗಳು ಕೃಷಿ ಮಹಾವಿದ್ಯಾಲಯಗಳು ಪರಿಚಯಿಸುತ್ತಿದೆ. ರೈತರು ಹೊಸ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಮುಂದಾಗಬೇಕು ಎಂದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದಿರಿ

<><><>

ಮಾನ್ಯತಾ ಟೆಕ್ಪಾರ್ಕ್ ಬಳಿ ರಾಜಕಾಲುವೆ ಪರಿಶೀಲನೆ ನಡೆಸಿದ್ದು ಅಲ್ಲಿ ರಾಜಕಾಲುವೆ ಒತ್ತುವರಿ ಗಮನಿಸಲಾಗಿದೆ. ಒತ್ತುವರಿಯನ್ನು ಕೂಡಲೇ ತೆರವುಗೊಳಿಸಲು ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕಳೆದ ಎರಡು ದಿನಗಳಿಂದ ಬೆಂಗಳೂರು ನಗರದಲ್ಲಿ ತೀವ್ರ ಮಳೆಯಿಂದಾಗಿರುವ ಹಾನಿಯನ್ನು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರೊಂದಿಗೆ ಪರಿಶೀಲಿಸಿ ಮಾತನಾಡಿದರು. ಮೊದಲಿಗೆ ಬೃಹತ್ ಬೆಂಗಳೂರು ಯಲಹಂಕ ವ್ಯಾಪ್ತಿಯಲ್ಲಿನ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದ ಅವರು ಯಲಹಂಕದಲ್ಲಿ ರಾಜ ಕಾಲುವೆ ಒತ್ತುವರಿ ಸ್ಥಳ ಪರಿಶೀಲಿಸಿ, ಒತ್ತುವರಿ ಆಗಿರುವ ಸ್ಥಳಗಳನ್ನು ಮುಲಾಜಿಲ್ಲದೆ ತೆರವುಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಬಾಧಿತ ಪ್ರದೇಶಗಳಲ್ಲಿ ಬೇಸ್ ಮೆಂಟ್ ಪಾರ್ಕಿಂಗ್, ಕೆಳ ಹಂತದಲ್ಲಿ ಮನೆ ನಿರ್ಮಾಣಕ್ಕೆ ಅವಕಾಶ ನೀಡದಂತೆ ಟೌನ್ ಪ್ಲ್ಯಾನಿಂಗ್ ನಲ್ಲಿ ಬದಲಾವಣೆ ತರುವ ದಿಕ್ಕಿನಲ್ಲಿ ಸೂಚನೆ ನೀಡಿದರು.

<><><>

ರಾಜ್ಯ ಸರ್ಕಾರದ ಬೊಕ್ಕಸವು ಆರ್ಥಿಕವಾಗಿ ದಿವಾಳಿಯಾಗಿದೆ. ಸಾಲ ಪಡೆದು ಸರ್ಕಾರಿ ನೌಕರರ ಸಂಬಳ ಕೊಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಹೀಗಿರುವಾಗ ಕಾಂಗ್ರೆಸ್ ಸರ್ಕಾರ ತನ್ನ 2 ವರ್ಷಗಳ ಆಡಳಿತಾವಧಿ ಪೂರೈಸಿದ ಸಂದರ್ಭದಲ್ಲಿ ಸಾಧನಾ ಸಮಾವೇಶ ಮಾಡಿರುವುದು ಸಲ್ಲ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ ಬೆಂಗಳೂರಿನಲ್ಲಿ ಹೇಳಿದ್ದಾರೆ. 'ಕರ್ನಾಟಕ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳ ಆರೋಪ ಪಟ್ಟಿ' ಶೀರ್ಷಿಕೆಯಡಿ ಸುದ್ದಿಗೋಷ್ಠಿ ನಡೆಸಿದ ಅವರು, ರಾಜ್ಯ ಸರ್ಕಾರ ಕಳೆದ ಎರಡು ವರ್ಷಗಳಿಂದ ಭ್ರಷ್ಟಾಚಾರದಲ್ಲಿ ತೊಡಗಿಕೊಂಡಿದೆ. ಯಾವುದೇ ರೀತಿಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿಲ್ಲ. ಹೊಸಪೇಟೆಯಲ್ಲಿ ಸಾಧನಾ ಸಮಾವೇಶ ಆಯೋಜಿಸಿ ಸುಳ್ಳುಗಳನ್ನು ಪ್ರತಿಪಾದಿಸಿದೆ ಎಂದರು. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಆಸ್ತಿ ತೆರಿಗೆ ಸೇರಿದಂತೆ ಅನೇಕ ರೀತಿಯಲ್ಲಿ ದರ ಹೆಚ್ಚಳ ಮಾಡಲಾಗಿದೆ. ಪರಿಶಿಷ್ಟ ಜಾತಿಗೆ ಮೀಸಲಿಟ್ಟಿದ್ದ ಹಣವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ. ಮುಡಾ ಹಗರಣ, ಕೆಪಿಎಸ್‌ಸಿ ಪ್ರಶ್ನೆ ಪತ್ರಿಕೆಯಲ್ಲಿ ತಪ್ಪು ಮುದ್ರಣ, ಅವೈಜ್ಞಾನಿಕ ಗ್ಯಾರಂಟಿಗಳ ಘೋಷಣೆಯಿಂದಾಗಿ ರಾಜ್ಯ ಸಾಲದ ಸುಳಿಗೆ ಸಿಲುಕಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಲ ಮಾಡಿ, ಸರ್ಕಾರ ನಡೆಸುತ್ತಿದ್ದಾರೆ. ಹೀಗಿರುವಾಗ 2 ವರ್ಷ ಪೂರೈಸಿದ್ದಕ್ಕಾಗಿ ಸಾಧನಾ ಸಮಾವೇಶ ಮಾಡಿರುವುದು ಸರಿಯಲ್ಲ ಎಂದರು. ಬಳಿಕ ಆರ್. ಅಶೋಕ ನೇತೃತ್ವದ ಬಿಜೆಪಿ ನಿಯೋಗವು ರಾಜಭವನಕ್ಕೆ ತೆರಳಿ ರಾಜ್ಯಪಾಲರನ್ನು ಭೇಟಿ ಮಾಡಿ ರಾಜ್ಯ ಸರ್ಕಾರದ ವಿರುದ್ಧ ದೂರು ಸಲ್ಲಿಸಿತು.

<><><>

ವಿಜಯಪುರ ಜಿಲ್ಲೆಗೆ 3 ಸಂಚಾರಿ ಆರೋಗ್ಯ ಘಟಕದ ವಾಹನಗಳು ಮಂಜೂರಾಗಿದ್ದು, ಈಗಾಗಲೇ ವಿಜಯಪುರ ಜಿಲ್ಲೆಗೆ ಬಂದಿರುವ 2 ಸಂಚಾರಿ ಆರೋಗ್ಯ ಘಟಕಗಳಿಗೆ ಚಾಲನೆಯನ್ನು ನೀಡಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಹೇಳಿದ್ದಾರೆ. ಕಾರ್ಮಿಕರಿದ್ದಲ್ಲಿ ಆರೋಗ್ಯ ತಪಾಸಣೆಗೆ ಅನುಕೂಲ ಕಲ್ಪಿಸುವ ವಿನೂತನ ಸಂಚಾರಿ ಆರೋಗ್ಯ ವಾಹನಕ್ಕೆ ವಿಜಯಪುರದಲ್ಲಿ ಸಂಚಾರಿ ಆರೋಗ್ಯ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದರು.

<><><>

ವಿಜಯನಗರ ಜಿಲ್ಲೆ ಕೂಡ್ಲಿಗಿ ತಾಲೂಕಿನ,ಗೆದ್ದಲಗಟ್ಟೆ ಬೆಟ್ಟದಲ್ಲಿ ಕಬ್ಬಿಣ ಹಾಗೂ ಮಹಾಶಿಲಾಯುಗ ಕಾಲಘಟ್ಟದ ರೇಖಾಚಿತ್ರಗಳು ಪತ್ತೆಯಾಗಿವೆ. ಬಂಡೆಯೊಂದರ ಮೇಲ್ಭಾಗದಲ್ಲಿ ಕೆಂಪು ಬಣ್ಣದಲ್ಲಿ ರಚಿಸಲಾದ ಆಕಳಿನ ಪಾರ್ಶ್ವಭಾಗ, ಬಿಲ್ಲು ಬಾಣಗಳನ್ನು ಹಿಡಿದಿರುವ ಬೇಟೆಗಾರನ ಚಿತ್ರ, ಉದ್ದನೆಯ ಬಾಲ ಹಾಗೂ ಕಾಲುಗಳನ್ನು ಹೊಂದಿರುವ ಪ್ರಾಣಿಯ ಅಸ್ಪಷ್ಟ ಚಿತ್ರ ಪತ್ತೆಯಾಗಿದೆ. ಗ್ರಾಮದ ನಾಲ್ಕಾರು ಯುವಕರನ್ನು ಒಟ್ಟುಗೂಡಿಸಿ ಬೆಟ್ಟದಲ್ಲಿರುವ ಈ ಚಿತ್ರಗಳನ್ನು ಪತ್ತೆ ಹಚ್ಚಿರುವ ಗೆದ್ದಲಗಟ್ಟೆ ಪ್ರಾಥಮಿಕ ಶಾಲಾ ಶಿಕ್ಷಕರಾದ ಶೇಖರಯ್ಯ ಟಿ.ಎಚ್.ಎಂ ಅವರು ಈ ಚಿತ್ರಗಳ ಬಗ್ಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ..

ಧ್ವನಿ: ಶೇಖರಯ್ಯ ಟಿ.ಎಚ್.ಎಂ

<><><>

ಪ್ರಸಕ್ತ ವರ್ಷ ನೈರುತ್ಯ ಮುಂಗಾರು ದೇಶಕ್ಕೆ ವಾಡಿಕೆಗಿಂತ ತುಸು ಬೇಗನೇಆಗಮಿಸಲಿದ್ದು, ಮುಂದಿನ ಮೂರು, ನಾಲ್ಕು ದಿನಗಳಲ್ಲಿ ಕೇರಳ ಪ್ರವೇಶಿಸುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಮಧ್ಯೆ ಕರ್ನಾಟಕದ ಕರಾವಳಿ ಭಾಗ, ಮಹಾರಾಷ್ಟ್ರ, ಕೇರಳ, ಗೋವಾ ಸೇರಿದಂತೆ ಹಲವೆಡೆ ಭಾರೀ ಮಳೆ ಮುಂದಿನ ಐದಾರು ದಿನ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ಸಂಕ್ಷಿಪ್ತ ಸುದ್ದಿ

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದೇ ತಿಂಗಳ 25 ರಂದು ಪ್ರಸಾರವಾಗಲಿರುವ ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ-ವಿದೇಶದಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ನ 122ನೇ ಆವೃತ್ತಿಯಾಗಿದೆ. ನರೇಂದ್ರ ಮೋದಿ ಆ್ಯಪ್ ಅಥವಾ 'ಮೈಗೌ ಓಪನ್ ಫೋರಂ' ಮೂಲಕ ಅನಿಸಿಕೆಗಳನ್ನು ಹಂಚಿಕೊಳ್ಳಲು ನಾಳೆಯವರೆಗೆ ಅವಕಾಶವಿದೆ.

<><><>

ಕೇಂದ್ರ ಲೋಕಸೇವಾ ಆಯೋಗ ನಡೆಸುವ ಇಂಡಿಯನ್ ಫಾರೆಸ್ಟ್ ಸರ್ವೀಸ್ ಫಲಿತಾಂಶ ಪ್ರಕಟಗೊಂಡಿದ್ದು, ಕೋಲಾರ ತಾಲ್ಲೂಕಿನ ಮೇಡಿತಂಬಿಹಳ್ಳಿಯ ಎಂ.ಎಸ್.ಉಲ್ಲಾಸ್ 57ನೇ ರ‍್ಯಾಂಕ್ ಪಡೆದುಕೊಂಡಿದ್ದಾರೆ.

<><><>

ಭಯೋತ್ಪಾದನಾ ವಿರೋಧಿ ದಿನ ಆಚರಣೆ ಅಂಗವಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ "ಪ್ರಮಾಣ ವಚನ" ಬೋಧಿಸಿದರು.

<><><><><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ಅಮೃತ ಭಾರತ್ ರೈಲ್ವೆ ನಿಲ್ದಾಣ ಯೋಜನೆ; ರಾಜ್ಯದ ಐದು ನವೀಕೃತ ನಿಲ್ದಾಣಗಳು ಇಂದು ಪ್ರಧಾನಿ ಅವರಿಂದ ಲೋಕಾರ್ಪಣೆ.

- ಮಾನವ ಆನೆ ಸಂಘರ್ಷ ತಡೆಗಟ್ಟಲು ಅಕ್ಕ ಪಕ್ಕದ ರಾಜ್ಯಗಳ ಸಹಕಾರ ಅಗತ್ಯ– ಮುಖ್ಯಮಂತ್ರಿ ಸಿದ್ದರಾಮಯ್ಯ.
- ಬೆಂಗಳೂರಿನಲ್ಲಿ ಮಳೆ ಹಾನಿ ಪರಿಶೀಲನೆ; ರಾಜಕಾಲುವೆ ಒತ್ತುವರಿ ಕೂಡಲೇ ತೆರವುಗೊಳಿಸುವಂತೆ ಮುಖ್ಯಮಂತ್ರಿಯವರಿಂದ ಸೂಚನೆ.
- ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ –ವಿಪಕ್ಷ ನಾಯಕ ಆರ್. ಅಶೋಕ ಟೀಕೆ.

<><><>